# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **1064** |
| **ಸದಸ್ಯರ ಹೆಸರು** | **ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನಸಭಾ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | **16.12.2025** |
| **ಉತ್ತರಿಸುವ ಸಚಿವರು** | **ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು.** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೆಂಪು ಕಲ್ಲು, ಗಣಿಗಾರಿಕೆ ಸಂಬಂಧ ರಾಯಲ್ಟಿ ಹೆಚ್ಚಳ ಮಾಡಿ ಕಠಿಣ ನಿಯಮ ರೂಪಿಸಿರುವುದರಿಂದ, ಜಿಲ್ಲೆಯಲ್ಲಿ ಈ ಉದ್ಯಮವನ್ನೇ ಅವಲಂಬಿಸಿರುವ ಕಾರ್ಮಿಕರು ಸೇರಿದಂತೆ ಸಾವಿರಾರು ಮಂದಿ ಅತ್ಯಂತ ಸಂಕಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | • ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ಕೆಂಪು ಕಲ್ಲುಗಣಿಗಾರಿಕೆಗೆ 19 ಗುತ್ತಿಗೆಗಳನ್ನು ಮಂಜೂರು ಮಾಡಿ, ಚಾಲ್ತಿಯಲ್ಲಿದ್ದು, ಸದರಿ ಗುತ್ತಿಗೆಗಳಿಂದ 2024-25ನೇ ಸಾಲಿನಲ್ಲಿ 1,14,539 ಮೆಟ್ರಿಕ್ ಟನ್ ಮತ್ತು 2025-26ನೇ ಸಾಲಿನಲ್ಲಿ 9,14,698 ಮೆಟ್ರಿಕ್ ಟನ್ ಕೆಂಪು ಕಲ್ಲನ್ನು ಉತ್ಪಾದಿಸಿ ಸಾಗಾಣಿಕೆ ಮಾಡಲಾಗಿದೆ.<br>• ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು 3-A(a) ರಂತೆ ಲ್ಯಾಟರೈಟ್ ತೆಗೆಯಲು 24 ಸಂಖ್ಯೆಯ ಕಾರ್ಯಾದೇಶಗಳನ್ನು ಮಂಜೂರು ಮಾಡಿ, ಚಾಲ್ತಿಯಲ್ಲಿದ್ದು, ಸದರಿ ಗುತ್ತಿಗೆಗಳಿಂದ 2024-25ನೇ ಸಾಲಿನಲ್ಲಿ 9,659 ಮೆಟ್ರಿಕ್ ಟನ್ ಮತ್ತು 2025-26ನೇ ಸಾಲಿನಲ್ಲಿ 79 ಕಾರ್ಯಾದೇಶಗಳಲ್ಲಿ 4,59,654 ಮೆಟ್ರಿಕ್ ಟನ್ ಲ್ಯಾಟರೈಟ್ ಉತ್ಪಾದಿಸಿ ಸಾಗಾಣಿಕೆ ಮಾಡಲಾಗಿದೆ.<br>• ದಿನಾಂಕ:17-09-2025 ರಂದು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2025ನ್ನು ಜಾರಿಗೆ ತಂದಿದ್ದು, ನಿಯಮ-3-Aಗೆ ತಿದ್ದುಪಡಿ ತಂದು ಲ್ಯಾಟರೈಟ್ ಇಟ್ಟಿಗೆ ತೆಗೆಯಲು ಕಾರ್ಯಾದೇಶ ಮತ್ತು ಲೈಸೆನ್ಸ್ ನೀಡುವ ನಿಯಮಗಳನ್ನು ಸರಳೀಕರಣಗೊಳಿಸಿ, ಕೆಂಪು ಕಲ್ಲಿಗೆ ಸಂಬಂಧಿಸಿದಂತೆ ವಿಧಿಸಲಾಗುತ್ತಿದ್ದ ಶುಲ್ಕಗಳನ್ನು ಕಡಿಮೆಗೊಳಿಸಲಾಗಿದೆ.<br>• ಈ ಸಂಬಂದ ವಿಧಾನ ಸಭೆಯ ಸನ್ಮಾನ್ಯ ಸಭಾಧ್ಯಕ್ಷರು, ಜಿಲ್ಲಾ ಉಸ್ತುವಾರಿ ಸಚಿವರು, ಮಾನ್ಯ ಶಾಸಕರು ಹಾಗೂ ಮಾನ್ಯ ಜನಪ್ರತಿನಿದಿಗಳ ಜೊತೆಗೆ ಸಭೆ ನಡೆಸಿ ಬೇಡಿಕೆಗಳಿಗನುಗುಣವಾಗಿ ಕೆಂಪುಕಲ್ಲು ಪೂರೈಕೆಗೆ ಅಗತ್ಯ ಕ್ರಮ ವಹಿಸಲಾಗುತ್ತಿದೆ. |
| ಆ) | ಬಂದಿದ್ದಲ್ಲಿ ಕಟ್ಟಡ ನಿರ್ಮಾಣ ಕ್ಷೇತ್ರಕ್ಕೆ ಅತ್ಯವಶ್ಯಕವಾಗಿ ಬೇಕಾಗಿರುವ ಕೆಂಪು ಕಲ್ಲು ಬೇಡಿಕೆಗನುಗುಣವಾಗಿ ಪೂರೈಕೆಯಾಗದೆ ಜಿಲ್ಲೆಯಲ್ಲಿ ಕಟ್ಟಡ ನಿರ್ಮಾಣ ಕ್ಷೇತ್ರ ತೀವ್ರ ತೊಂದರೆಗೆ ಸಿಲುಕಿರುವುದನ್ನು ಪರಿಹರಿಸಲು, ಕೆಂಪು ಕಲ್ಲು ಗಣಿಗಾರಿಕೆ ನಿಯಮಗಳನ್ನು ಸರಳೀಕರಿಸಲು ಸರ್ಕಾರ ಇದುವರೆಗೆ ತೆಗೆದುಕೊಂಡ ಕ್ರಮವೇನು; | |
| ಇ) | ಕೆಂಪು ಕಲ್ಲು ಗಣಿಗಾರಿಕೆ ಜ್ವಲಂತ ಸಮಸ್ಯೆಯಾಗಿ ಕಾಡುವುದರ ಜೊತೆಗೆ ಜಿಲ್ಲೆಯ ಆರ್ಥಿಕತೆಗೂ ದೊಡ್ಡ ಹೊಡೆತ ನೀಡಿದ್ದು, ಯಾವ ಕಾಲಮಿತಿಯೊಳಗೆ ಇದಕ್ಕೆ ಶಾಶ್ವತ ಪರಿಹಾರ ಒದಗಿಸಲಾಗುವುದು; | |
| ಈ) | ಕೆಂಪು ಕಲ್ಲು ಗಣಿಗಾರಿಕೆ ನಿಯಮಗಳನ್ನು ಸಾಕಷ್ಟು ಸರಳೀಕರಿಸುವ ಮೂಲಕ ಇಡೀ ಜಿಲ್ಲೆಯಲ್ಲಿ ಸಂಷ್ಟಕ್ಕೆ ಸಿಲುಕಿರುವ ನಿರ್ಮಾಣ ಕ್ಷೇತ್ರ ಹಾಗೂ ಕಾರ್ಮಿಕ ವರ್ಗಕ್ಕೆ ಯಾವಾಗ ಶಾಶ್ವತ ಪರಿಹಾರ ಒದಗಿಸಲಾಗುವುದು? | |

ಸಂಖ್ಯೆ:ಸಿಐ-ಎಂಎಂಎನ್/324/2025

(ಎಸ್.ಎಸ್.ಮಲ್ಲಿಕಾರ್ಜುನ)
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.